# 5ನೇ ಭಾರತ-ಯು.ಎಸ್ 2+2 ಸಚಿವರ ಸಂವಾದ

ನವೆಂಬರ್ 08, 2023

ನವೆಂಬರ್ 10, 2023ರಂದು 5ನೇ ವಾರ್ಷಿಕ 2+2 ಸಂವಾದಕ್ಕಾಗಿ ಭಾರತಕ್ಕೆ ಆಗಮಿಸುತ್ತಿರುವ ಯುಎಸ್ ರಕ್ಷಣಾ ಕಾರ್ಯದರ್ಶಿ ಆಂಟೋನಿ ಜೆ. ಬ್ಲಿಂಕೆನ್ ಮತ್ತು ರಕ್ಷಣಾ ಕಾರ್ಯದರ್ಶಿ ಲಾಯ್ಡ್ ಜೆ. ಆಸ್ಟಿನ್ III ಅವರನ್ನು, ಕೇಂದ್ರ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಮತ್ತು ವಿದೇಶಾಂಗ ಸಚಿವ ಎಸ್ ಜೈಶಂಕರ್ ಅವರು ನವದೆಹಲಿಯಲ್ಲಿ ಸ್ವಾಗತಿಸಲಿದ್ದಾರೆ.

2+2 ಸಂವಾದದಲ್ಲಿ ಉಭಯ ದೇಶಗಳ ನಡುವಿನ ದ್ವಿಪಕ್ಷೀಯ ಸಂಬಂಧಗಳ ಅಭಿವೃದ್ಧಿ ಮತ್ತು ರಕ್ಷಣೆ ಮತ್ತು ಭದ್ರತಾ ಸಹಕಾರ, ತಂತ್ರಜ್ಞಾನ ಸೇರಿ ಹಲವು ವಿಷಯಗಳ ಕುರಿತು ಚರ್ಚೆ ನಡೆಯಲಿದೆ.

ಪ್ರಧಾನಿ ಶ್ರೀ ನರೇಂದ್ರ ಮೋದಿ ಮತ್ತು ಅಧ್ಯಕ್ಷ ಜೋಸೆಫ್ ಬೈಡೆನ್ ಅವರು ಈ ವರ್ಷದ ಜೂನ್ ಮತ್ತು ಸೆಪ್ಟೆಂಬರ್‌ನಲ್ಲಿ ನಡೆಸಿದ ಚರ್ಚೆಯ ಮಾರ್ಗಸೂಚಿಯನ್ನು ಜಾರಿಗೆ ತರುವುದರ ಕುರಿತು ಉಭಯ ದೇಶಗಳು ಸಚಿವರು ನಿರ್ಧಾರ ತೆಗೆದುಕೊಳ್ಳಲಿದ್ದಾರೆ.

ಭಾರತ ಹಾಗೂ ಯುಎಸ್ ನ ಸಚಿವರು ಸಮಕಾಲೀನ ಪ್ರಾದೇಶಿಕ ಸಮಸ್ಯೆಗಳ ಬಗ್ಗೆಯೂ ಚರ್ಚೆ ನಡೆಸಲಿದ್ದು, ಬಹುಪಕ್ಷೀಯ ವೇದಿಕೆಗಳಲ್ಲಿ ಮತ್ತು ಕ್ವಾಡ್‌ನಂತಹ ಚೌಕಟ್ಟುಗಳ ಮೂಲಕ ಸಹಕಾರವನ್ನು ವರ್ಧಿಸಲು ಹಂಚಿಕೆಯ ಆದ್ಯತೆಗಳ ಬಗ್ಗೆ ಅಭಿಪ್ರಾಯಗಳನ್ನು ವಿನಿಮಯ ಮಾಡಿಕೊಳ್ಳಲಿದ್ದಾರೆ.

ಇನ್ನೂ ರಕ್ಷಣಾ ಮಂತ್ರಿ ಮತ್ತು ವಿದೇಶಾಂಗ ಸಚಿವರು ಸಹ ತಮ್ಮ ಸಂಬಂಧಿತ ಯುಎಸ್ ಪ್ರತಿನಿಧಿಗಳೊಂದಿಗೆ ದ್ವಿಪಕ್ಷೀಯ ಸಭೆಗಳನ್ನು ನಡೆಸಲು ನಿರ್ಧರಿಸಿದ್ದು, ಇದು ಭಾರತ-ಯುಎಸ್ ನಡುವಿನ ರಾಜತಾಂತ್ರಿಕ ಸಂವಾದ ಹಾಗೂ ಸಮಗ್ರ ಜಾಗತಿಕ ಕಾರ್ಯತಂತ್ರದ ಪಾಲುದಾರಿಕೆಯನ್ನು ದೃಢಪಡಿಸುತ್ತದೆ.

**ನವ ದೆಹಲಿ**
**ನವೆಂಬರ್ 08, 2023**